O.S **06/2020**

P.W.3

ಸಾಕ್ಷಿಯನ್ನು ದಿಃ 15-11-2025 ರಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

<u>ಪಾಟೀ ಸವಾಲುಃ</u> ಶ್ರೀ ಎಮ್.ಎಸ್.ಬಿ. **1** ಮತ್ತು **2** ನೇ ಪ್ರತಿವಾದಿ ಪರ ವಕೀಲರಿಂದ

ವಾದಿ ಮತ್ತು ಪ್ರತಿವಾದಿಯರ ಕುಟುಂಬಕ್ಕೆ ನಾನು ಅಳಿಯನಾಗಬೇಕು. ಪ್ರತಿವಾದಿ 1 ಸೇನೆಯಲ್ಲಿ ಸೇವೆ ಸಲ್ಲಿಸಿರುತ್ತಾರೆಂದರೆ ಸರಿ. ಪ್ರತಿವಾದಿ 2 ಖಾಸಗಿ ಕೆಲಸ ಮಾಡಿಕೊಂಡು ಜೀವನ ಮಾಡುತ್ತಿದ್ದಾರೆಂದರೆ ಸರಿ. ನಾನು ಬಿ.ಎಸ್.ಸಿ ಪದವಿ ಹೊಂದಿರುತ್ತೇನೆ. ಶಂಕ್ರಪ್ಪನಿಗೆ 4 ಜನ ಸಹೋದರರು ಇರುತ್ತಾರೆ. ಅವರ ಹೆಸರು ಹಾಲಪ್ಪ, ಶಿವಪ್ಪ, ಕಲ್ಲಪ್ಪ, ಬಸವಣ್ಣೆಪ್ಪ ಇರುತ್ತಾರೆ. ಇವರೆಲ್ಲರೂ ಒಟ್ಟು ಕುಟುಂಬದಲ್ಲಿ ವಾಸವಿದ್ದರು ಎಂದರೆ ಸರಿ. ದಾವಾ ಆಸ್ತಿಗಳು ಶಂಕ್ರಪ್ಪನ ಹೆಸರಿನಲ್ಲಿ ಇರುವುದಿಲ್ಲ ಎಂದರೆ ಸರಿಯಲ್ಲ ಶಂಕ್ರಪ್ಪನಲ್ಲಿ ಹೆಸರಿನಲ್ಲಿ ಇದ್ದ ದಾಖಲಾತಿಗಳನ್ನು ನಾನು ಪರಿಶೀಲಿಸಿರುತ್ತೇನೆ. ಶಂಕ್ರಪ್ಪನಿಗೆ ದಾವಾ ಆಸ್ತಿಗಳನ್ನು ಹೊರತು ಪಡಿಸಿ ಬೇರೆ ಯಾವುದೇ ಆಸ್ತಿಗಳು ಇರುವುದಿಲ್ಲ. ಹೊಳೆ-ಇಟಗಿಯಲ್ಲಿ ಶಂಕ್ರಪ್ಪನ ಕುಟುಂಬಕ್ಕೆ ಸೇರಿದ ಆಸ್ತಿಗಳು ಇದ್ದವು ಎಂದರೆ ಸರಿಯಲ್ಲ. ಸದರಿ ಆಸ್ತಿಗಳ ಬಗ್ಗೆ ಮಾಹಿತಿ ಇದ್ದರೂ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ನ್ಯಾಯಾಲಯದಲ್ಲಿ ಸಾಕ್ಷಿ ಹೇಳಲು ನನಗೆ ಸಮನ್ಸ ಬಂದಿರುತ್ತದೆ.

2.1 ಮತ್ತು 2 ಪ್ರತಿವಾದಿಗಳು ದಾವಾ ಆಸ್ತಿಗಳನ್ನು ತಮ್ಮ ಸ್ವಂತ ದುಡಿಮೆಯಿಂದ ಖರೀದಿ ಮಾಡಿರುತ್ತಾರೆಂದರೆ ಸರಿಯಲ್ಲ. ವಾದಿಯರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ

ಮರು ವಿಚಾರಣೆ ಇಲ್ಲ.

(ನನ್ನ ಉಕ್ತ ಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓದಿ ಹೇ ಕೇ ಸರಿ ಅದೆ.

Sd/- 15.11.2025
ಹಿರಿಯ ದಿವಾಣಿ ನ್ಯಾಯಾಧೀಶರು
ಹಾಗೂ ಪ್ರ.ದ.ನ್ಯಾದಂ. ಲಕ್ಷ್ಮೇಶ್ವರ

ಸಾಕ್ಷಿದಾರರ ಸಹಿಃ Sd/-